ಕರ್ನಾಟಕ ಸರ್ಕಾರ (ಸಿ.ಆರ್.ಪಿ. 67)

| |
|---|
| ಹೇಳಿಕೆ ಹಾಳೆ<br>(ಆರ್.ಪಿ. ಸಂಖ್ಯೆ 57)<br>ನಮೂನೆ ಸಂಖ್ಯೆ 4<br>(ಸಿವಿಲ್) |

ದಿವಾಣಿ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ. ಹಳಿಯಾಳ
ಇವರ ನ್ಯಾಯಾಲಯದಲ್ಲಿ.

ಸಿ.ಸಿ. ನಂ.: 1544/2022

..................................................................

CW 02
PW 06

| | | |
|---|---|---|
| ಹೆಸರು | : | ಬಸವಂತ ತಳವಾರ |
| ತಂದೆಯ ಹೆಸರು | : | ಸುಭಾಷ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ಗೌಂಡಿ ಕೆಲಸ |
| ವಾಸಸ್ಥಳ | : | ತೇರಗಾಂವ. |

ದಿನಾಂಕ 23-03-2026 ರಂದು ಸಾಕ್ಷಿಗೆ ಸತ್ಯಪ್ರತಿಜ್ಞೆ ಪ್ರಮಾಣವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :

ನನಗೆ ಚಾಸಾ 3, 8 ರಿಂದ 10 ರವರ ಪರಿಚಯ ಇದೆ. ಚಾಸಾ 1, ರವರು ಪರಿಚಯವಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಘಟನಾ ಜಾಗದ ಪಂಚನಾಮೆ ಆಗಿದ್ದು, ಅದರಲ್ಲಿನ ತಮ್ಮ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಘಟನಾ ಜಾಗದ ಪಂಚನಾಮೆಯನ್ನು ಈಗಾಗಲೇ ನಿಪಿ 6 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 6 ಬಿ ಎಂದು** ಗುರುತಿಸಲಾಯಿತು. ಸುಮಾರು 4 ವರ್ಷಗಳ ಹಿಂದೆ ಹಳಿಯಾಳದ ಗುತ್ತಿಗೇರಿ ಕ್ರಾಸ್ ಹತ್ತಿರ ಅಪಘಾತದ ವಿಚಾರವಾಗಿ ಮಾಡಿರುತ್ತೇನೆ. ಸಾಕ್ಷಿಗೆ ನಿಪಿ 7 ಅನ್ನು ತೋರಿಸಲಾಗಿ ಅದರಲ್ಲಿ ತಾವು, ಚಾಸಾ 3 ಮತ್ತು ಚಾಸಾ 9 ರವರು ಇರುತ್ತೇವೆ ಎನ್ನುತ್ತಾರೆ. ನಿಪಿ 6 ಕ್ಕೆ ಘಟನಾ ಜಾಗದಲ್ಲಿ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಕಚ್ಚಾ ನಕಾಶೆ ಆಗಿದ್ದು, ಅದರಲ್ಲಿನ ತಮ್ಮ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಕಚ್ಚಾ ನಕಾಶೆಯನ್ನು ಈಗಾಗಲೇ ನಿಪಿ 8 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 8 ಬಿ ಎಂದು** ಗುರುತಿಸಲಾಯಿತು.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು ಮೋಟಾರ ಸೈಕಲ್ ಪರಿಶೀಲನಾ ಪಂಚನಾಮೆ ಆಗಿದ್ದು, ಅದರಲ್ಲಿನ ತಮ್ಮ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಮೋಟಾರ ಸೈಕಲ್ ಪರಿಶೀಲನಾ ಪಂಚನಾಮೆ ಈಗಾಗಲೇ ನಿಪಿ 9 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು **ನಿಪಿ 9 ಬಿ ಎಂದು** ಗುರುತಿಸಲಾಯಿತು.

ಸಾಕ್ಷಿಗೆ ನಿಪಿ 2 ಅನ್ನು ತೋರಿಸಲಾಗಿ ಅದರಲ್ಲಿ ತಾವು, ಚಾಸಾ 3 ಮತ್ತು ಚಾಸಾ 9 ರವರು ಇರುತ್ತೇವೆ ಎನ್ನುತ್ತಾರೆ. ನಿಪಿ 2 ಅನ್ನು ಠಾಣೆಯಲ್ಲಿ ತೆಗೆಯಲಾಗಿದೆ ಮತ್ತು ನಿಪಿ 9 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

(ಈ ಹಂತದಲ್ಲಿ ಸಸಅ ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಸಾಕ್ಷ್ಯ ಹಾಗೂ ಪ್ರಕರಣದ ಇತರ ಅಂಶಗಳನ್ನು ಗಮನಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು ).

**ಪಾಟೀ ಸವಾಲು : ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ದಿನಾಂಕ 13-10-2022 ರಂದು ಗುತ್ತಿಗೇರಿ ಗಲ್ಲಿಯ ಶಿವಾಜಿ ಆಟೋ ಗ್ಯಾರೇಜ್ ಹತ್ತಿರ ಪಂಚನಾಮೆಯನ್ನು ಮಧ್ಯಾಹ್ನ 02-30 ರಿಂದ 03-30 ರ ವರೆಗೆ ಜರುಗಿಸಲಾಯಿತು ಎಂದರೆ ಸರಿ.

ಅದೇ ದಿನ ಠಾಣೆಯಲ್ಲಿ ಪೊಲೀಸರು ಮಧ್ಯಾಹ್ನ 03-45 ರಿಂದ 04-45 ರ ವರೆಗೆ ಮೋಟಾರ ಸೈಕಲ್ ನಂಬರ ಕೆಎ-65-ಎಚ್-0408 ನೇದ್ದರ ಪರಿಶೀಲನಾ ಪಂಚನಾಮೆಯನ್ನು ಜರುಗಿಸಿ ನಿಮ್ಮ ಸಹಿ ಪಡೆದರು ಎಂದರೆ ಸರಿ. ಎರಡೂ ಪಂಚನಾಮೆಗಳನ್ನು ಓದಿ ಹೇಳಿದ ನಂತರ ಸಹಿ ಮಾಡಿರುತ್ತೀರಿ ಎಂದರೆ ಸರಿ.

**ಪಾಟೀ ಸವಾಲು :** ಆರೋಪಿಯ ಪರ ಶ್ರೀಮತಿ ಆರ್ ಎಮ್ ಸಿ ವಕೀಲರಿಂದ.

ನನಗೆ ಓದಲು ಬರೆಯಲು ಬರುವುದಿಲ್ಲ. ಪಂಚನಾಮೆಯನ್ನು ಓದಿ ಹೇಳಿದ್ದಾರೆಯೇ ಎಂದರೆ ಸಾಕ್ಷಿ ಸಹಿ ಮಾಡಿದ ನಂತರ ಓದಿ ಹೇಳಿದ್ದಾರೆ ಎನ್ನುತ್ತಾರೆ. ಅಪಘಾತ ಯಾರ ತಪ್ಪಿನಿಂದ ಆಗಿದೆ ಎಂದು ನಾನು ನೋಡಿಲ್ಲ ಎಂದರೆ ಸರಿ. ಘಟನಾ ಜಾಗದ ಚಕ್ಕು ಬಂದಿ ಹೇಳಲು ಆಗುವುದಿಲ್ಲ. ಠಾಣೆಯಲ್ಲಿ ಪೊಲೀಸರು ನಿಮ್ಮಿಂದ ಸಹಿ ಪಡೆದಿರುತ್ತಾರೆ ಎಂದರೆ ಸರಿ. ಸುಳ್ಳು ಸಾಕ್ಷ್ಯ ನುಡಿಯುತ್ತಿದೀರಿ ಎಂದರೆ ಸರಿಯಲ್ಲ. ನಿಮ್ಮ ಯಾವುದೇ ಭಾವಚಿತ್ರ ತೆಗೆದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರಿಂದ.**

ಪಂಚನಾಮೆಗಳಿಗೆ ಎಲ್ಲಿ ಸಹಿ ಮಾಡಿರುತ್ತೀರಿ ಎಂದರೆ ಸಾಕ್ಷಿ ಒಂದು ಪಂಚನಾಮೆಗೆ ಜಾಗದಲ್ಲಿ ಸಹಿ ಮಾಡಿ, ಭಾವಚಿತ್ರವನ್ನು ತೆಗೆಸಿಕೊಂಡಿರುತ್ತೇನೆ. ಇನ್ನೊಂದು ಪಂಚನಾಮೆಗೆ ಠಾಣೆಯಲ್ಲಿ ಸಹಿ ಮಾಡಿ, ಭಾವಚಿತ್ರವನ್ನು ತೆಗೆಸಿಕೊಂಡಿರುತ್ತೇನೆ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

ಓ.ಹೇ.ಕೇ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂ., ಹಳಿಯಾಳ.